# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 2684
ಸದಸ್ಯರ ಹೆಸರು : ಶ್ರೀ ಯು.ಬಿ.ವೆಂಕಟೇಶ್
ಉತ್ತರಿಸುವ ದಿನಾಂಕ : 25-03-2022
ಉತ್ತರಿಸುವ ಸಚಿವರು : ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಜನರ ಮೇಲಿನ ದೌರ್ಜನ್ಯಕ್ಕೆ ಸಂಬಂಧಿಸಿದ ವಿಚಾರಣೆಗೆ ಬಾಕಿ ಇರುವ ಪ್ರಕರಣಗಳೆಷ್ಟು; (ವರ್ಷವಾರು ಮಾಹಿತಿ ಒದಗಿಸುವುದು) | 2019, 2020 ಮತ್ತು 2021ನೇ ಕ್ಯಾಲೆಂಡರ್ ವರ್ಷದಲ್ಲಿ ದೌರ್ಜನ್ಯ ಪ್ರಕರಣಗಳ ಬಾಕಿ, ಸ್ವೀಕೃತಿ ಮತ್ತು ವಿಲೇವಾರಿಯಾದ **ಮಾಹಿತಿಯನ್ನು ಅನುಬಂಧದಲ್ಲಿ ನೀಡಲಾಗಿದೆ.** |
| ಆ) | ಈ ವಿಚಾರಣೆಗಳ ತ್ವರಿತ ಇತ್ಯರ್ಥಕ್ಕೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು; | ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆಯಿಂದ ದಿನಾಂಕ:04.01.2021 ರಂದು ಹೊರಡಿಸಿರುವ ಸುತ್ತೋಲೆಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ (ದೌರ್ಜನ್ಯ ತಡೆ) ಕಾಯ್ದೆ ಪ್ರಕರಣಗಳಲ್ಲಿ ಶಿಕ್ಷೆ ಪ್ರಮಾಣ ಹೆಚ್ಚಿಸಿ ತಪ್ಪಿಸ್ಥರಿಗೆ ಶಿಕ್ಷೆಯಾಗುವ ಬಗ್ಗೆ ಕ್ರಮ ಕೈಗೊಳ್ಳಲು ರಾಜ್ಯದ ಎಲ್ಲಾ ವಿಶೇಷ ಸರ್ಕಾರಿ ಅಭಿಯೋಜಕರುಗಳಿಗೆ ಸೂಚನೆ ನೀಡಲಾಗಿರುತ್ತದೆ. **(ಸುತ್ತೋಲೆ ಪ್ರತಿ ಲಗತ್ತಿಸಿದೆ)**<br>ಮಾನ್ಯ ಮುಖ್ಯ ಮಂತ್ರಿಗಳ ಅಧ್ಯಕ್ಷತೆಯಲ್ಲಿ ರಾಜ್ಯ ಜಾಗೃತಿ ಮತ್ತು ಉಸ್ತುವಾರಿ ಸಮಿತಿ ಸಭೆ ನಡೆಸಿ ದೌರ್ಜನ್ಯ ತಡೆ ಕಾಯ್ದೆಯ ಪರಿಣಾಮ ಕಾರಿ ಅನುಷ್ಠಾನದ ಬಗ್ಗೆ ಸಂಬಂಧಪಟ್ಟವರಿಗೆ ಸೂಚನೆಗಳನ್ನು ನೀಡಲಾಗಿದೆ.<br>ಎಸ್‌ಸಿ/ಎಸ್‌ಟಿ ದೌರ್ಜನ್ಯ ತಡೆ ಕಾಯ್ದೆ ಬಗ್ಗೆ ದಿನಾಂಕ:16.07.2021 ಹಾಗೂ 17.07.2021 ರಂದು ಎರಡು ದಿನಗಳ ಕಾರ್ಯಾಗಾರವನ್ನು ಕರ್ನಾಟಕ ಜುಡಿಷಿಯನ್ ಅಕಾಡೆಮಿಯಿಂದ ಏರ್ಪಡಿಸಿ ಸಂಬಂಧಪಟ್ಟ ಸರ್ಕಾರಿ ಅಭಿಯೋಜಕರಿಗೆ ತರಬೇತಿಯನ್ನು ನೀಡಲಾಗಿರುತ್ತದೆ. |
| ಇ) | ಎಷ್ಟು ಪ್ರಕರಣಗಳಲ್ಲಿ ಆರೋಪ ಸಾಬೀತಾಗಿ ಕ್ರಮ ಕೈಗೊಳ್ಳಲಾಗಿದೆ? | ಆರೋಪ ಸಾಬೀತಾದ ಪ್ರಕರಣಗಳ ವಿವರ ಕೆಳಕಂಡಂತಿದೆ.<br>(ಕೆಳಗಿನ ಕೋಷ್ಟಕ)<br>ಆರೋಪ ಸಾಬೀತಾದ ಪ್ರಕರಣಗಳಲ್ಲಿ, ನ್ಯಾಯಾಲಯದ ಆದೇಶದಂತೆ ಕ್ರಮಕೈಗೊಳ್ಳಲಾಗುತ್ತಿದೆ. |

| ಕ್ರಮ ಸಂಖ್ಯೆ | ಕ್ಯಾಲೆಂಡರ್ ವರ್ಷ | ಆರೋಪ ಸಾಬೀತಾದ ಪ್ರಕರಣಗಳ ಸಂಖ್ಯೆ |
|---|---|---|
| 1 | 2019 | 88 |
| 2 | 2020 | 69 |
| 3 | 2021 | 97 |

ಸಕಇ 30 ಎಸ್‌ಪಿಎ 2022

(ಕೋಟ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಮತ್ತು ಹಿಂದುಳಿದ
ವರ್ಗಗಳ ಕಲ್ಯಾಣ ಸಚಿವರು

ಅನುಬಂಧ

**Detailes of Cases Scheduled Castes and the Scheduled Tries (Prevention of atrocities) Act, 1989**

**Year wise case details**

| Sl. No. | Year | No of cases pending during the beginning of the year | No. of cases received during the year | Total | No of cases dispose | | | Total No. of disposal | Total No. of Pending cases | Percentage of Conviction |
|---|---|---|---|---|---|---|---|---|---|---|
| | | | | | Convi ction | Acquittal | Otherwise disposed | | | |
| 01. | 2019 | 5434 | 1802 | 7236 | 88 | 1179 | 302 | 1569 | 5667 | 07% |
| 02. | 2020 | 5667 | 1708 | 7375 | 69 | 611 | 139 | 819 | 6556 | 10% |
| 03. | 2021 | 6556 | 1928 | 8484 | 97 | 1362 | 191 | 1650 | 6834 | 07% |

ಕರ್ನಾಟಕ ಸರ್ಕಾರ

(ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆ)

ಸಂಖ್ಯೆ: ಎಡಿಪಿ/ಆಡಳಿತ/ಸುತ್ತೋಲೆ/06/2015-16.

ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ
ನಿರ್ದೇಶಕರ ಕಛೇರಿ,
6ನೇ ಮಹಡಿ, ಕೆ ಹೆಚ್ ಬಿ ಕಾಂಪ್ಲೆಕ್ಸ್,
ಕಾವೇರಿ ಭವನ, ಕೆ.ಜಿ.ರಸ್ತೆ,
ಬೆಂಗಳೂರು-560 009.
ದಿನಾಂಕ: 04/01/2021.

:: ಸುತ್ತೋಲೆ :-

ವಿಷಯ: ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ (ದೌರ್ಜನ್ಯ ತಡೆ) ಕಾಯ್ದೆ ಪ್ರಕರಣಗಳಲ್ಲಿ ಶಿಕ್ಷೆ ಪ್ರಮಾಣ ಹೆಚ್ಚಿಸಿ ತಪ್ಪಿತಸ್ಥರಿಗೆ ಶಿಕ್ಷೆಯಾಗುವ ಬಗ್ಗೆ ಕ್ರಮ ಕೈಗೊಳ್ಳುವ ಕುರಿತು.

ಉಲ್ಲೇಖ: ದಿನಾಂಕ: 11.11.2020ರಂದು ಮಾನ್ಯ ಮುಖ್ಯ ಮಂತ್ರಿಗಳವರ ಅಧ್ಯಕ್ಷತೆಯಲ್ಲಿ ನಡೆದ ರಾಜ್ಯ ಮಟ್ಟದ ಸಮಿತಿ ಸಭೆ ನಡವಳಿಗಳು.

*****

ದಿನಾಂಕ:11.11.2020ರಂದು ಮಾನ್ಯ ಮುಖ್ಯ ಮಂತ್ರಿಗಳವರ ಅಧ್ಯಕ್ಷತೆಯಲ್ಲಿ ನಡೆದ ರಾಜ್ಯ ಮಟ್ಟದ ಸಮಿತಿ ಸಭೆಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ (ದೌರ್ಜನ್ಯ ತಡೆ) ಜಾಗೃತಿ ಮತ್ತು ಉಸ್ತುವಾರಿ ಸಮಿತಿ ಸಭೆ ಸೇರಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಕಾಯ್ದೆ ಅಡಿ ಪ್ರಕರಣಗಳಲ್ಲಿ ಶಿಕ್ಷೆಯ ಪ್ರಮಾಣ ಶೇ:5 ರಿಂದ ಶೇ:6 ರಷ್ಟು ಇದ್ದು ಸಂಬಂಧಪಟ್ಟ ಸರ್ಕಾರಿ ಅಭಿಯೋಜಕರು ಬಾಕಿ ಇರುವ ಪ್ರಕರಣಗಳ ಬಗ್ಗೆ ಮುತುವರ್ಜಿ ವಹಿಸಿ ಸಮರ್ಥವಾಗಿ ವಾದ ಮಂಡಿಸಿ ಪ್ರಕರಣಗಳನ್ನು ಇತ್ಯರ್ಥಗೊಳಿಸಿ ತಪ್ಪಿತಸ್ಥರಿಗೆ ಶಿಕ್ಷೆಯಾಗುವ ಬಗ್ಗೆ ಕ್ರಮ ಕೈಗೊಳ್ಳಬೇಕೆಂದು ಸೂಚಿಸಲಾಗಿರುತ್ತದೆ.

ಆದುದರಿಂದ, ರಾಜ್ಯದ ವಿವಿಧ ನ್ಯಾಯಾಲಯಗಳಲ್ಲಿ ವಿಚಾರಣೆಗೆ ಇರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ (ದೌರ್ಜನ್ಯ ತಡೆ)ಕಾಯ್ದೆ ಪ್ರಕರಣಗಳನ್ನು ಆದ್ಯತೆಯ ಮೇರೆಗೆ ವಿಲೇವಾರಿ ಮಾಡಲು ಹಾಗೂ ಶಿಕ್ಷೆಯ ಪ್ರಮಾಣ ಹೆಚ್ಚಿಸುವಲ್ಲಿ ಅಭಿಯೋಜನೆ ಪರ ಇತ್ತೀಚೆಗೆ ನೀಡಲಾಗಿರುವ ಮಾನ್ಯ ಸರ್ವೋಚ್ಚ ನ್ಯಾಯಾಲಯ ಹಾಗೂ ಮಾನ್ಯ ಉಚ್ಚ ನ್ಯಾಯಾಲಯಗಳಲ್ಲಿ ವರದಿಯಾಗಿರುವ ತೀರ್ಪುಗಳಲ್ಲಿನ ಸಿದ್ಧಾಂತಗಳನ್ನು ಅಳವಡಿಸಿಕೊಂಡು ಪರಿಣಾಮಕಾರಿಯಾಗಿ ವಾದ ಮಂಡಿಸಿ ಪ್ರಕರಣಗಳನ್ನು ಇತ್ಯರ್ಥಗೊಳಿಸಿ ತಪ್ಪಿತಸ್ಥರಿಗೆ ಶಿಕ್ಷೆಯಾಗುವ ಬಗ್ಗೆ ಮತ್ತು ನೊಂದ ವ್ಯಕ್ತಿಗಳಿಗೆ ಶೀಘ್ರ ನ್ಯಾಯದೊರಕಿಸಿಕೊಡಲು ನಿಯಮಾನುಸಾರ ಅಗತ್ಯ ಕ್ರಮ ಕೈಗೊಳ್ಳಲು ಈ ಮೂಲಕ ಸೂಚಿಸಲಾಗಿದೆ.

ಮೇಲ್ಕಂಡ ಹೇಳಿದ ವಿಷಯಗಳ ಬಗ್ಗೆ ಅಗತ್ಯ ಕ್ರಮ ಕೈಗೊಂಡು ಆ ಬಗ್ಗೆ ವರದಿ ಸಲ್ಲಿಸಬೇಕೆಂದು ಸದರಿ ಪ್ರಕರಣಗಳನ್ನು ನಡೆಸುತ್ತಿರುವ ಎಲ್ಲಾ ವಿಶೇಷ ಸರ್ಕಾರಿ ಅಭಿಯೋಜಕರುಗಳಿಗೆ ಈ ಮೂಲಕ ಸೂಚಿಸಲಾಗಿದೆ.

(ಹೆಚ್. ಕೆ. ಜಗದೀಶ್)
ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ
ನಿರ್ದೇಶಕರು(ಪ್ರ) ಬೆಂಗಳೂರು.

ರಾಜ್ಯದ ಎಲ್ಲಾ ವಿಶೇಷ ಸರ್ಕಾರಿ ಅಭಿಯೋಜಕರುಗಳಿಗೆ
(ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ (ದೌರ್ಜನ್ಯ ತಡೆ)
ವಿಶೇಷ ನ್ಯಾಯಾಲಯಗಳು).

[redacted]

ಕೆ.ಹೆಚ್.ಬಿ. ಕಾಂಪ್ಲೆಕ್ಸ್, ಕಾವೇರಿ ಭವನ,
ಬೆಂಗಳೂರು, ದಿನಾಂಕ: 12.08.[redacted]

ಸರ್ಕಾರದ ಅಪರ ಮುಖ್ಯ ಕಾರ್ಯ[redacted]
ಒಳಾಡಳಿತ ಇಲಾಖೆ,
ವಿಧಾನಸೌಧ,
<u>ಬೆಂಗಳೂರು</u>

– ಇವರಿಗೆ

ಮಾನ್ಯರೆ,

ವಿಷಯ: ಎಸ್.ಸಿ. / ಎಸ್.ಟಿ. ದೌರ್ಜನ್ಯ ತಡೆ ಕಾಯ್ದೆ ಜಾರಿ ಬಗ್ಗೆ ಸರ್ಕಾರಿ ಅಭಿಯೋಜಕರುಗಳಿಗೆ ಸಿಬ್ಬಂದಿಗಳಿಗೆ ತರಬೇತಿ ಆಯೋಜಿಸುವ ಕುರಿತು.

ಉಲ್ಲೇಖ: ಸರ್ಕಾರದ ಪತ್ರ ಸಂಖ್ಯೆ: ಒಇ 119 ಪಿಪಿಇ 2021, ದಿನಾಂಕ: 30.07.2021.

******

ಸರ್ಕಾರದ ಉಲ್ಲೇಖಿತ ಪತ್ರದಲ್ಲಿ ಎಸ್.ಸಿ./ಎಸ್.ಟಿ. ದೌರ್ಜನ್ಯ ತಡೆ ಕಾಯ್ದೆ ಜಾರಿ ಬಗ್ಗೆ ಹೆಚ್ಚಿನ ಅರಿವು ಮೂಡಿಸುವ ಸಂಬಂಧ ಸರ್ಕಾರಿ ಅಭಿಯೋಜಕರು ಹಾಗೂ ಪೋಲೀಸ್ ಅಧಿಕಾರಿಗಳಿಗೆ ತರಬೇತಿ ಆಯೋಜಿಸುವಂತೆ ಕೋರಿರುವ ಪತ್ರದ ಪ್ರತಿಯನ್ನು ಕಳುಹಿಸಿದ್ದು, ಸದರಿ ಪತ್ರದ ಬಗ್ಗೆ ಪರಿಶೀಲಿಸಿ ತರಬೇತಿ ಆಯೋಜಿಸುವ ಬಗ್ಗೆ ಅಗತ್ಯ ಕ್ರಮವಹಿಸುವಂತೆ ಹಾಗೂ ಕೈಗೊಂಡ ಕ್ರಮದ ಬಗ್ಗೆ ಮಾಹಿತಿಯನ್ನು ಒದಗಿಸಲು ಕೋರಲಾಗಿದೆ.

ಎಸ್.ಸಿ./ಎಸ್.ಟಿ. ದೌರ್ಜನ್ಯ ತಡೆ ಕಾಯ್ದೆಯಡಿಯಲ್ಲಿ ದಿನಾಂಕ: 16.07.2021 ಹಾಗೂ 17.07.2021ರಂದು 02 ದಿನಗಳ ಕಾರ್ಯಾಗಾರವನ್ನು ಕರ್ನಾಟಕ ಜುಡಿಷಿಯಲ್ ಅಕಾಡೆಮಿ ವತಿಯಿಂದ ಏರ್ಪಡಿಸಿದ್ದು, ಸಂಬಂಧಪಟ್ಟ ಸರ್ಕಾರಿ ಅಭಿಯೋಜಕರುಗಳಿಗೆ ತರಬೇತಿಯನ್ನು ನೀಡಲಾಗಿದೆ ಎಂಬ ಮಾಹಿತಿಯನ್ನು ಸರ್ಕಾರದ ಅವಗಾಹನೆಗಾಗಿ ಸಲ್ಲಿಸಲಾಗಿದೆ.

ತಮ್ಮ ವಿಶ್ವಾಸಿ,

ರವಾನಿಸಲಾಗಿದೆ
ಸಹಿ:
ದಿನಾಂಕ: 17/08/2021

( ಹೆಚ್.ಕೆ. ಜಗದೀಶ್ )
ನಿರ್ದೇಶಕರು(ಪ್ರ),
ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ
ಇಲಾಖೆ, ಬೆಂಗಳೂರು
(ದೂರವಾಣಿ ಸಂಖ್ಯೆ:080-22213856) 12/8/2021

EST-1/To Govt/Covr. Ltrs. 2.

[redacted]

1. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, 5ನೇ ಮಹಡಿ,ಬಹುಮಹಡಿಗಳ ಕಟ್ಟಡ, ಬೆಂಗಳೂರು ಇವರ ಮಾಹಿತಿಗಾಗಿ.
2. ಮುಖ್ಯ ಕಛೇರಿಯ ಎಲ್ಲಾ ಅಭಿಯೋಗ ಉಪ ನಿದೇಶಕರುಗಳಿಗೆ ಮಾಹಿತಿಗಾಗಿ.
3. ರಾಜ್ಯದ ಎಲಾ ವಲಯದಲ್ಲ ಕಾನೂನು ಅದಿಕಾರಿ (ಹಿರಿಯ) ಇವರ ಮಾಹಿತಿಗಾಗಿ.
4. ಮುಖ್ಯ ಕಛೇರಿಯ ಕಾನೂನು ಅಧಿಕಾರಿ (ಹಿರಿಯ) ಇವರುಗಳ ಮಾಹಿತಿಗಾಗಿ.
5. ಮುಖ್ಯ ಕಛೇರಿಯ ಕೇಂದ್ರ ಸಹಾಯಕರು / ವಿಷಯ ನಿರ್ವಾಹಕರು ಇವರ ಮಾಹಿತಿಗಾಗಿ.
6. ರಕ್ಷಾ ಕಡತಕ್ಕೆ.
7. ಕಛೇರಿ ಪ್ರತಿ.